# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 132 | Pages. 2 | Date: 28-04-2026, TUESDAY RNI NO: KARKAN/2024/89601 Kannada Daily

ಸಂಪುಟ : 02 – ಸಂಚಿಕೆ : 132 – ಪುಟಗಳು : 2 28-04-2026 ಮಂಗಳವಾರ Ph: 8762954248 ದರ : ₹1


# ಸಿಲಿಂಡರ್ ಕಂಪನಿಗೆ ಭಾರೀ ದಂಡದ ಬಿಸಿ


## 29 ಲಕ್ಷ ರೂ. ಪಾವತಿಗೆ ಗ್ರಾಹಕರ ಆಯೋಗ ಆದೇಶ | ಕಾನೂನು ಹೋರಾಟಕ್ಕೆ ಜಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಅರಸೀಕೆರೆ: ಸಿಲಿಂಡರ್ ಸ್ಫೋಟದಿಂದ ನಷ್ಟ ಸಂಭವಿಸಿದ್ದರೂ ಪರಿಹಾರ ನೀಡದ ಕಂಪನಿಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಭಾರೀ ಮೊತ್ತದ ದಂಡ ವಿಧಿಸುವ ಮೂಲಕ ಬಿಸಿ ಮುಟ್ಟಿಸಿದೆ.

ಮಂಗಳೂರಿನ ಎಲ್‌ಪಿಜಿ ಟೆರಿಟೋರಿಟಿಗೆ 27 ಲಕ್ಷ ರೂ. ಮತ್ತು ಎಸ್‌ಬಿಐ ಜನರಲ್ ಇನ್ಸುರೆನ್ಸ್‌ಗೆ 2 ಲಕ್ಷ ರೂ. ದಂಡ ವಿಧಿಸಿ ಆಯೋಗದ ಅಧ್ಯಕ್ಷೆ ಸಿ.ಎಂ. ಚಂಚಲ ಹಾಗೂ ಸದಸ್ಯೆ ಆರ್. ಅನುಪಮ ಅವರ ಪೀಠ ಆದೇಶಿಸಿದೆ.

ನಗರದ ಚನ್ನಬಸಪ್ಪ ಅವರ ಮನೆಯಲ್ಲಿ 2023ರ ಅ. 10ರಂದು ಅವಘಡ ನಡೆದಿತ್ತು. ಅರಸೀಕೆರೆಯ ಕುಸುಮ ಗ್ಯಾಸ್ ಏಜೆನ್ಸಿಯಿಂದ ಸಿಲಿಂಡರ್ ಪಡೆದಿದ್ದ ಚನ್ನಬಸಪ್ಪ ಅವರು ನ್ಯಾಯಕ್ಕಾಗಿ ಆಯೋಗದ ಮೆಟ್ಟಿಲೇರಿದ್ದರು. ಗ್ಯಾಸ್ ಸೋರಿಕೆಯಿಂದ ಚನ್ನಬಸಪ್ಪ ಅವರ ಪತ್ನಿಗೆ ಬೆಂಕಿ ತಗುಲಿ ಗಾಯಗೊಂಡಿದ್ದಾರೆ. ಜೊತೆಗೆ ಮನೆ ತುಂಬಾ ಬೆಂಕಿ ಹೊತ್ತಿ 15,000 ತೆಂಗಿನ ಕಾಯಿ ಸುಟ್ಟು ಹೋಗಿದ್ದವು. ಜೊತೆಗೆ 3 ಅಲ್ಮೇರಾ, ಟಿ.ವಿ. ರೆಫ್ರಿಜಿರೇಟರ್,




ಫರ್ನಿಚರ್, ಪಾತ್ರೆ, ತರಕಾರಿ ಪದಾರ್ಥ, 105 ಗ್ರಾಂ ಚಿನ್ನ, 500 ಗ್ರಾಂ ಬೆಳ್ಳಿ ಹಾಗೂ ಅಲ್ಮೇರಾದಲ್ಲಿದ್ದ 1 ಲಕ್ಷ ರೂ. ನಗದು ಸುಟ್ಟು ಕರಕಲಾಗಿ ಮನೆ ಗೋಡೆಗಳು ಸಹ ಬಿರುಕು ಬಿಟ್ಟಿದ್ದವು.

ಈ ನಷ್ಟಕ್ಕೆ ಕಳಪೆ ಸಿಲಿಂಡರ್, ರೆಗ್ಯೂಲೇಟರ್ ಮತ್ತು ಪೈಪ್ ಕಾರಣವೆಂದು ಆರೋಪಿಸಿದ್ದ ಚನ್ನಬಸಪ್ಪ ಬಾಣಾವರ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಸ್ಥಳಕ್ಕೆ ಭೇಟಿ ನೀಡಿದ್ದ ಅಗ್ನಿಶಾಮಕ ದಳದ ಅಧಿಕಾರಿಗಳು ಸುಮಾರು 29 ಲಕ್ಷ ರೂ. ವರೆಗೆ ನಷ್ಟವಾಗಿದೆಯೆಂದು ವರದಿ ನೀಡಿದ್ದರು. ಅದೇ ರೀತಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಲೆಕ್ಕಾಧಿಕಾರಿ ಸಹ ಅದೇ ರೀತಿ ಹೇಳಿದ್ದರು.

ಸಿಲಿಂಡರ್ ಎಡವಟ್ಟಿನಿಂದ ಇಷ್ಟೆಲ್ಲಾ ಸಮಸ್ಯೆಯಾಗಿರುವುದು ಗೊತ್ತಿದ್ದರೂ ಕಂಪನಿಯವರು ವಿಮೆ ಅಥವಾ ಪರಿಹಾರ ನೀಡಲು ಹಿಂದೇಟು ಹಾಕಿದ್ದರು. ತಮಗೆ 49.75 ಲಕ್ಷ ರೂ. ಕೊಡಿಸಬೇಕೆಂದು ಚನ್ನಬಸಪ್ಪ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ 2025ರ ಮೇ 27 ರಂದು ದೂರು ಸಲ್ಲಿಕೆಯಾಗಿತ್ತು.

ಎಸ್‌ಬಿಐ ಜನರಲ್ ಇನ್ಸುರೆನ್ಸ್ ತನ್ನ ವಾದದಲ್ಲಿ, ಚನ್ನಬಸಪ್ಪ ಹಾಗೂ ನಮಗೆ ಯಾವುದೇ ಗ್ರಾಹಕ ಸಂಬಂಧವಿಲ್ಲ. ಮೂರನೇ ವ್ಯಕ್ತಿಗೆ ವಿಮೆ ನೀಡುವುದಿಲ್ಲ. ಆದ್ದರಿಂದ ವಿಮಾ ಪರಿಹಾರ ನೀಡಲು ಸಾಧ್ಯವಿಲ್ಲ ಹಾಗೂ ತಮ್ಮಿಂದ ಸೇವಾ ನ್ಯೂನ್ಯತೆ ಉಂಟಾಗಿರುವುದಿಲ್ಲವೆಂದು ವಾದಿಸಿದ್ದರು.

ಪೀಠವು, ಗ್ರಾಹಕ ಚನ್ನಬಸಪ್ಪ ಅವರ ನಿರ್ಲಕ್ಷ್ಯದಿಂದ ಅಗ್ನಿ ಅವಘಡ ಸಂಭವಿಸಿದೆ ಎಂದು ಸಾಬೀತುಪಡಿಸುವ ಯಾವ ಪುರಾವೆಗಳು ಇಲ್ಲದ ಕಾರಣ ದಂಡ ಭರಿಸಬೇಕಾಗುತ್ತದೆ ಎಂದು ತೀರ್ಮಾನಿಸಿ ಒಟ್ಟು 27 ಲಕ್ಷ ರೂ. ದಂಡ, ಸೇವಾ ನ್ಯೂನ್ಯತೆಗಾಗಿ 5 ಸಾವಿರ ರೂ., ಮಾನಸಿಕ ಹಿಂಸೆಗಾಗಿ 5 ಸಾವಿರ ರೂ., ಫಿರ್ಯಾದಿ ಶುಲ್ಕ 5 ಸಾವಿರ ರೂ.ಗಳನ್ನು ಮುಂದಿನ ಆರು ವಾರಗಳ ಒಳಗೆ ಪಾವತಿಸಬೇಕೆಂದು ಆದೇಶಿಸಿದೆ.

### ಉಷ್ಣಾಂಶದಿಂದ ಬೆಂಕಿ ಎಂಬ ವಾದ

**ಆಯೋಗದ ಎದುರು ವಿಚಾರಣೆಗೆ ಹಾಜರಾಗಿದ್ದ ಗ್ಯಾಸ್ ಏಜೆನ್ಸಿಯವರು ತಾವು ಕೇವಲ ಕಮಿಷನ್ ಆಧಾರದ ಮೇಲೆ ಸಿಲಿಂಡರ್ ಸರಬರಾಜು ಮಾಡುವ ಮಧ್ಯವರ್ತಿಯಾಗಿ ಕೆಲಸ ಮಾಡುತ್ತೇವೆ. ಅವಘಡದ ವಿಡೀಯೋ ತುಣುಕಗಳ ಪ್ರಕಾರ ಮೊದಲು ತೆಂಗಿನ ರಾಶಿಯಿಂದ ಬೆಂಕಿ ಹೊತ್ತಿ ನಂತರ ಅಡುಗೆ ಮನೆಗೆ ಆವರಿಸಿದೆ. ಅದರಿಂದ ಉಂಟಾದ ಉಷ್ಣಾಂಶದಿಂದ ಸಿಲಿಂಡರ್ ಸ್ಫೋಟಗೊಂಡಿರಬಹುದೇ ವಿನಃ ಗ್ಯಾಸ್ ಸೋರಿಕೆಯಿಂದಲ್ಲ. ಸಿಲಿಂಡರ್ ಪಡೆದ 40 ದಿನಗಳ ಬಳಿಕ ಅವಘಡ ಸಂಭವಿಸಿರುವುದರಿಂದ ಕಳಪೆ ಎನ್ನಲು ಸಾಧ್ಯವಿಲ್ಲ. ಹೆಚ್ಚಿನ ಪರಿಹಾರಕ್ಕಾಗಿ ನಮ್ಮ ವಿರುದ್ಧ ಆರೋಪ ಮಾಡುತ್ತಿದ್ದಾರೆ ಎಂಬ ಹೇಳಿಕೆಯನ್ನು ಕಂಪನಿ ನೀಡಿತ್ತು.**

### ಗ್ಯಾಸ್ ಬುಕ್ಕಿಂಗ್‌ನಲ್ಲಿ ಮಹಾ ಮೋಸ

**ಪ್ರಸ್ತುತ ದಿನಗಳಲ್ಲಿ ಗ್ಯಾಸ್ ಸಿಲಿಂಡರ್ ಪೂರೈಕೆ ಕಡಿಮೆಯಾಗುತ್ತಿರುವ ಹಿನ್ನಲೆಯಲ್ಲಿ ಅಧಿಕ ಬೆಲೆಗೆ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಬೆಳಕಿಗೆ ಬಂದಿದೆ.**

**ನಗರದ ಹರ್ಷ ಮಹಲ್ ಹೋಟೆಲ್ ರಸ್ತೆಯಲ್ಲಿರುವ ಭಾರತ್ ಗ್ಯಾಸ್ ಏಜೆನ್ಸಿಯವರು ಒಂದೂವರೆ ತಿಂಗಳ ಹಿಂದೆ ಬುಕ್ಕಿಂಗ್ ಆದವರಿಗೆ ಇನ್ನೂ ಸಿಲಿಂಡರ್ ನೀಡಿದೆ ಪ್ರತಿದಿನ ಒಂದೊಂದು ನೆಪ ಹೇಳಿ ವಾಪಸ್ ಕಳುಹಿಸುತ್ತಿದ್ದಾರೆಂಬ ಗಂಭೀರ ಆರೋಪ ಕೇಳಿಬಂದಿದೆ.**

**ಮಾರ್ಚ್‌ನಲ್ಲಿ ಮೊಬೈಲ್‌ನಲ್ಲಿ ಗ್ಯಾಸ್ ಬುಕ್ ಮಾಡಿದವರಿಗೆ ಇನ್ನೂ ಸಿಲಿಂಡರ್ ಸಿಕ್ಕಿಲ್ಲ. ಈ ಬಗ್ಗೆ ಪ್ರತಿ ನಾಲ್ಕೈದು ದಿನಕ್ಕೊಮ್ಮೆ ವಿಚಾರಿಸಿದಾಗ ಲೋಡ್ ಇಲ್ಲ, ಬುಕ್ಕಿಂಗ್ ಆಗುತ್ತಿಲ್ಲ, ನಾಲ್ಕು ದಿನ ಬಿಟ್ಟು ಬನ್ನಿರಿ ಎನ್ನುತ್ತಾರೆ. ಅಸಲಿಗೆ ಲೋಡ್ ಬಂದಿಲ್ಲ, ಬುಕ್ಕಿಂಗ್ ಆಗುತ್ತಿಲ್ಲವೆಂಬುದು ಸಿಬ್ಬಂದಿಯ ಕಟ್ಟುಕಥೆ. ಹೆಚ್ಚಿನ ಹಣಕ್ಕೆ ಬೇರೆ ಕಡೆ ಸಿಲಿಂಡರ್ ಮಾರಾಟ ಮಾಡಲಾಗುತ್ತಿದೆ ಎನ್ನಲಾಗಿದೆ.**

# ರ್‍ಯಾಗಿಂಗ್ ವಿಚಾರವಾಗಿ ವಿದ್ಯಾರ್ಥಿಗಳ ಮಾರಾಮಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಪಶು ವೈದ್ಯಕೀಯ ಕಾಲೇಜಿನ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿಗಳ ಎರಡು ಗುಂಪಿನ ನಡುವೆ ರ್‍ಯಾಗಿಂಗ್ ವಿಚಾರಕ್ಕೆ ಸಂಬಂಧಿಸಿ ಮಾರಾಮಾರಿ ನಡೆದಿದೆ.

ರ್‍ಯಾಗಿಂಗ್ ಮಾಡಲಾಗುತ್ತಿದೆ ಎಂಬ ಕಾರಣಕ್ಕೆ ಸೀನಿಯರ್ ಹಾಗೂ ಜ್ಯೂನಿಯರ್ ವಿದ್ಯಾರ್ಥಿಗಳು ಪರಸ್ಪರ ಬಡಿದಾಡಿಕೊಂಡಿದ್ದಾರೆ ಎನ್ನಲಾಗಿದೆ.

ಚಿಕ್ಕಹೊನ್ನೇನಹಳ್ಳಿಯಲ್ಲಿರುವ ಪಶು ವೈದ್ಯಕೀಯ ಕಾಲೇಜು ಹಾಸ್ಟೆಲ್‌ನಲ್ಲಿ ಈ ಘಟನೆ ನಡೆದಿದ್ದು, ಎರಡೂ ಕಡೆಯವರು ಪರಸ್ಪರ ಹೊಡೆದಾಡಿಕೊಂಡಿದ್ದಾರೆ.

ಕೆಲವರು ಕಾಲಿನಿಂದ ಒದ್ದಿದ್ದಾರೆ.

ಹಾಸ್ಟೆಲ್‌ನಲ್ಲಿರುವ ಹಿರಿಯ ವಿದ್ಯಾರ್ಥಿಗಳಿಂದ ಕಿರಿಯ ವಿದ್ಯಾರ್ಥಿಗಳಿಗೆ ರ್‍ಯಾಗಿಂಗ್ ಮಾಡುತ್ತಿದ್ದಾರೆ ಎನ್ನಲಾಗಿದೆ. ಇದನ್ನು ಪ್ರಶ್ನೆ ಮಾಡಿದ್ದಕ್ಕೆ ಜ್ಯೂನಿಯರ್ ವಿದ್ಯಾರ್ಥಿಗಳ ಮೇಲೆ ಸೀನಿಯರ್ ವಿದ್ಯಾರ್ಥಿಗಳು ಹಾಸ್ಟೆಲ್‌ನಲ್ಲೇ ಕೈ ಕೈ ಮಿಲಾಯಿಸಿದ್ದಾರೆ. ಗಲಾಟೆ ಯಲ್ಲಿ ಹಲವು ವಿದ್ಯಾರ್ಥಿಗಳಿಗೆ ಸಣ್ಣಪುಟ್ಟ ಘಟನೆ ನಡೆದಿದ್ದು, ಈ ದೃಶ್ಯಾವಳಿ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಕಾಯಕಯೋಗಿ ಪ್ರಶಸ್ತಿಗೆ ಶ್ರಮಜೀವಿ ಇಂದ್ರಮ್ಮ ಆಯ್ಕೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನಿಂದ ಮೇ 1ರ ಕಾರ್ಮಿಕ ದಿನಾಚರಣೆಯಲ್ಲಿ ಆಲೂರು ತಾಲ್ಲೂಕಿನ ಕೊಡಗಿಹಳ್ಳಿ ಗ್ರಾಮದ ಇಂದ್ರಮ್ಮ ಅವರಿಗೆ ಕಾಯಕಯೋಗಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಪರಿಷತ್ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಸಮೀಪದ ಸೂಲಿಬೆಲೆಯಲ್ಲಿ ಮೇ 1ರ ಶುಕ್ರವಾರ ಪ್ರಶಸ್ತಿ ಪ್ರದಾನ ನಡೆಯಲಿದೆ. ಕಡು ಬಡತನದಲ್ಲಿ ಸ್ವಾವಲಂಬಿ ಬದುಕು ಕಟ್ಟಿಕೊಂಡಿರುವವರನ್ನು ಗುರುತಿಸಿ ಪ್ರೋತ್ಸಾಹಿಸುವುದು ಪರಿಷತ್‌ನ ಉದ್ದೇಶವಾಗಿದೆ ಎಂದರು.

ಇಂದ್ರಮ್ಮ ಅವರು ಕಾಡಿನಲ್ಲಿ ಸಿಗುವ ಬಿದಿರು ಸಂಗ್ರಹಿಸಿ ಅದರಿಂದ ಮರ, ಕುಕ್ಕೆ ತಯಾರಿಸಿ ಬದುಕು ನಡೆಸುತ್ತಿದ್ದಾರೆ. ಎರಡು ವರ್ಷಗಳ ಹಿಂದೆ ಗಂಡನನ್ನು ಕಳೆದುಕೊಂಡಿರುವ ಅವರು ಮಗನಿಗೆ ಉನ್ನತ ವ್ಯಾಸಂಗ ಕೊಡಿಸಿದ್ದಾರೆ. ಇಂದ್ರಮ್ಮ ಅವರು ಸಮಾಜಕ್ಕೆ ಮಾದರಿಯಾಗಿದ್ದಾರೆ ಎಂದರು.

ರಾಜ್ಯ ವೈಜ್ಞಾನಿಕ ಪರಿಷತ್ ಜಿಲ್ಲಾ ಗೌರವಾಧ್ಯಕ್ಷ ಕಮಲ್‌ಕುಮಾರ್ ಮಾತನಾಡಿ, ಪರಿಷತ್ ರಾಜ್ಯಾಧ್ಯಕ್ಷ ಹುಲಿಕಲ್ ನಟರಾಜ್ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ. ರಾಜ್ಯಾದ್ಯಂತ ಹತ್ತು ಹಲವು ಕಾರ್ಯಕ್ರಮಗಳನ್ನು ಪರಿಷತ್ ಆಯೋಜಿಸಿದೆ ಎಂದರು.

ಪ್ರಶಸ್ತಿಗೆ ಭಾಜನಾಗಿರುವ ಇಂದ್ರಮ್ಮ, ಪರಿಷತ್ ನಿರ್ದೇಶಕರಾದ ಯೋಗೀಶ್, ರಮೇಶ್, ನಂದಕುಮಾರ್, ವಿ.ಎಸ್. ರಾಣಿ ಹಾಜರಿದ್ದರು.

# ತೆಂಕಲಗೂಡು ಮಠದಲ್ಲಿ ಚನ್ನಮಲ್ಲಿಕಾರ್ಜುನ ಸ್ವಾಮಿ ಪುಣ್ಯ ಸ್ಮರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಸಕಲೇಶಪುರ ತಾಲ್ಲೂಕಿನ ಯಸಳೂರಿನ ತೆಂಕಲಗೂಡು ಬೃಹನ್ಮಠದಲ್ಲಿ ಶ್ರೀ ಚನ್ನಮಲ್ಲಿಕಾರ್ಜುನ ಸ್ವಾಮೀಜಿ 6ನೇ ವರ್ಷದ ಪುಣ್ಯಸ್ಮರಣೆ, ಚನ್ನಸಿದ್ಧೇಶ್ವರ ಸ್ವಾಮೀಜಿ 6ನೇ ವರ್ಷದ ಶ್ರೀ ಗುರು ಪಟ್ಟಾಧಿಕಾರ ವರ್ಧಂತಿ ಮಹೋತ್ಸವ ಏ. 29 ರಂದು ಭಕ್ತಿಭಾವದಿಂದ ನಡೆಯಲಿದೆ ಎಂದು ಮಠದ ಚನ್ನಸಿದ್ಧೇಶ್ವರ ಸ್ವಾಮೀಜಿ ತಿಳಿಸಿದರು.

ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾಶಿ ಜಗದ್ಗುರುಗಳ ಇಷ್ಟಲಿಂಗ ಮಹಾಪೂಜೆ, ವೀರಶೈವ ಪಂಚಸೂತ್ರೀಯ ಪ್ರವಚನ ಗ್ರಂಥ, ವೀರಶೈವ ಪದ ದರ್ಶನ ಹಾಗು ಸಿದ್ಧಾಂತ ಶಿಖಾಮಣಿ ಪ್ರಭೆ ಕೃತಿಗಳ ಲೋಕಾರ್ಪಣೆ, ಸಿದ್ಧಾಂತ ಶಿಖಾಮಣಿ ಪ್ರವಚನ-ಜನಜಾಗೃತಿ ಸಮಾವೇಶ ಹಾಗು ಸಾಮೂಹಿಕ




ಇಷ್ಟಲಿಂಗ ಶಿವದೀಕ್ಷಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.


ಪ್ರಾತಃಕಾಲ ಲಿಂಗೈಕ್ಯ ಸ್ವಾಮೀಜಿ ಅವರ ಕರ್ತೃ ಗದ್ದುಗೆಗಳಿಗೆ ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಅಷ್ಟೋತ್ತರ, ಅಲಂಕಾರ ಪೂಜೆ, ಮಹಾಮಂಗಳಾರತಿ ಹಾಗು ತೀರ್ಥಪ್ರಸಾದ ವಿನಿಯೋಗ ನಡೆಯಲಿದೆ. ಬೆಳಿಗ್ಗೆ 5 ಗಂಟೆಗೆ ಶಿವದೀಕ್ಷೆ ಹಾಗು ಅಯ್ಯಾಚಾರ, ಬೆಳಿಗ್ಗೆ 9 ಗಂಟೆಗೆ ಕಾಶೀ ಜ್ಞಾನಸಿಂಹಾಸನಾಧೀಶ್ವರ1008 ಜಗದ್ಗುರು ಡಾ. ಚಂದ್ರಶೇಖರ ಭಗವತ್ಪಾದರವರ ಇಷ್ಟಲಿಂಗ ಮಹಾಪೂಜೆ ಜರುಗಲಿದೆ ಎಂದರು.

ಬೆಳಿಗ್ಗೆ 11 ಗಂಟೆಗೆ ಸಿದ್ಧಾಂತ ಶಿಖಾಮಣಿ ಪ್ರವಚನ-ಜನಜಾಗೃತಿ ಸಮಾವೇಶ ನಡೆಯಲಿದ್ದು, ಕಾಶಿ ಮಹಾಪೀಠದ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಸಾನ್ನಿಧ್ಯ ವಹಿಸಲಿದ್ದಾರೆ. ಚನ್ನಸಿದ್ದೇಶ್ವರ ಸ್ವಾಮೀಜಿ ಕಾರ್ಯಕ್ರಮದ ನೇತೃತ್ವ

ವಹಿಸಲಿದ್ದು, ಹಲವು ಮಠಾಧೀಶರು ಆಗಮಿಸುವರು. ಸಂಸದ ಶ್ರೇಯಸ್ ಪಟೇಲ್ ಉದ್ಘಾಟನೆ ನೆರವೇರಿಸಲಿದ್ದು, ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಹೇಳಿದರು. ಶಾಸಕರಾದ ಸಿಮೆಂಟ್ ಮಂಜು, ಹೆಚ್.ಕೆ.ಸುರೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಗ್ರಂಥ ಲೋಕಾರ್ಪಣೆ ಮಾಡಲಿದ್ದಾರೆ. ಹಾಸನದ ಇಂಡಿಯಾನಾ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಹಾರ್ಟ್ ಸೆಂಟರ್, ತೆಂಕಲಗೂಡು ಬೃಹನ್ಮಠ, ಪುನರ್ಜೀವ ಸ್ವಯಂ ಸೇವಾ ಸಂಸ್ಥೆ ಹಾಗು ಚನ್ನರಾಯಪಟ್ಟಣ ಸ್ವಯಂ ಪ್ರೇರಿತ ರಕ್ತ ಕೇಂದ್ರದಿಂದ ಆರೋಗ್ಯ ಉಚಿತ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ಬಿಪಿ, ಸಕ್ಕರೆ ಪರೀಕ್ಷೆ, ಹೃದಯ, ಮೂಳೆ ತಪಾಸಣೆ, ಸ್ತ್ರೀ ಮತ್ತು ಪ್ರಸೂತಿ ಚಿಕಿತ್ಸೆ, ಉಸಿರಾಟದ ಸಮಸ್ಯೆ, ಮಂಡಿ, ಎದೆ ನೋವು, ಕಣ್ಣಿನ ತಪಾಸಣೆಯು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2ರ ವರೆಗೆ ನಡೆಯಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಮಮತಾ ಪಾಟೀಲ್, ಅವಿನಾಶ್, ದರ್ಶನ್, ಯೋಗೇಶ್ ಇದ್ದರು.

# ಮನೆಗೆ ನುಗ್ಗಿದ ಲಾರಿ: ತಪ್ಪಿದ ಭಾರೀ ಅನಾಹುತ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಅರಕಲಗೂಡು: ಪಟ್ಟಣದ ಸಾಲಗೇರಿ ಬಡಾವಣೆಯಲ್ಲಿ ಭಾನುವಾರ ರಾತ್ರಿ ಲಾರಿಯೊಂದು ಮನೆಗೆ ನುಗ್ಗಿ ಆರು ಜನರು ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ನಡೆದಿದೆ.

ಕೊಣನೂರು ಕಡೆಯಿಂದ ಚಿಕ್ಕಮಗಳೂರಿಗೆ ತೆರಳುತ್ತಿದ್ದ ಲಾರಿ ಚಾಲಕನ ಅಜಾಗರೂಕತೆಯಿಂದ ರಸ್ತೆ ಬದಿಯ ರಂಗನಾಥ್ ಎಂಬುವವರ ಮನೆಗೆ ನುಗ್ಗಿದೆ. ಕುಟುಂಬ ಸದಸ್ಯರು ತಕ್ಷಣವೇ ಹೊರಗೆ ಓಡಿ ಬಂದಿದ್ದರಿಂದ ಯಾವುದೇ ಅನಾಹುತ ಸಂಭವಿಸಿಲ್ಲ. ವಾಹನದ ಮುಂಭಾಗ ಸಂಪೂರ್ಣ ಜಖಂಗೊಂಡಿದ್ದರಿಂದ ಚಾಲಕ ದೀಪಕ್ ಗಂಭೀರ ಗಾಯಗೊಂಡಿದ್ದಾನೆ.


ಅಗ್ನಿ ಶಾಮಕ ಠಾಣಾಧಿಕಾರಿ ಎ.ವಿ.ಪರಮೇಶ್ವರಗೌಡ ಮತ್ತು ಸಿಬ್ಬಂದಿ ನಿರಂತರ ಒಂದು ಗಂಟೆ ಕಾರ್ಯಾಚಾರಣೆ ನಡೆಸಿ ಚಾಲಕನನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದರು. ಚಾಲಕ ದೀಪಕ್ ಚಿಕ್ಕಮಗಳೂರು ಜಿಲ್ಲೆ ಅಂಬಳೆ ಹೋಬಳಿ ಸಿರಗಾಪುರ ಗ್ರಾಮದವನು ಎನ್ನಲಾಗಿದೆ. ಪಟ್ಟಣ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

# ಏಕಾಏಕಿ ಕುಸಿದುಬಿದ್ದ ಯುವತಿ ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಬೇಲೂರು: ಆರೋಗ್ಯವಾಗಿಯೇ ಇದ್ದ ಯುವತಿಯೊಬ್ಬಳು ದಿಢೀರನೇ ಕುಸಿದು ಬಿದ್ದು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಬಂಡಿಲಕ್ಕನ ಕೊಪ್ಪಲು ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಸಾಫ್ಟ್‌ವೇರ್ ಇಂಜಿನಿಯರ್ ಬಿ.ಜಿ. ಶ್ವೇತಾ (25) ಮೃತರು. ಗಂಗಾಧರ್-ಸರೋಜ ದಂಪತಿ ಪುತ್ರಿ ಶ್ವೇತಾ ಇಂಜಿನಿಯರಿಂಗ್ ಮುಗಿಸಿ ಕಳೆದ 3 ವರ್ಷಗಳಿಂದ ಹಾಸನದ ಮ್ಯಾಗ್ನಾ ಸಾಫ್ಟ್‌ವೇರ್ ಖಾಸಗಿ ಕಂಪನಿಯಲ್ಲಿ ಶ್ವೇತಾ ಕೆಲಸ ಮಾಡುತ್ತಿದ್ದರು. ಶನಿವಾರ ಬಂಡಿಲಕ್ಕನಕೊಪ್ಪಲು ಗ್ರಾಮದಲ್ಲಿ ತನ್ನ ತಾಯಿ



ಜೊತೆ ಮಾತನಾಡುತ್ತಿದ್ದಾಗ ಅಚಾನಕ್ಕಾಗಿ ಕುಸಿದು ಬಿದ್ದು ಮಾತನಾಡಲಾಗದ ಸ್ಥಿತಿ ತಲುಪಿದಳು. ಮಾತಲಾಡಲಾಗದ ಸನ್ನಿವೇಶ ತಲುಪಿದಳು. ಕೂಡಲೇ ಹಾಸನದ ಮಂಗಳ ಆಸ್ಪತ್ರೆಗೆ ದಾಖಲಿಸಿದ್ದರು.

ನಂತರ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಮೆದುಳು ನಿಷ್ಕ್ರಿಯಗೊಂಡ ಕಾರಣ ಚಿಕಿತ್ಸೆ ಫಲಕಾರಿಯಾಗದೆ ಇಂದು ಬೆಳಗಿನ ಜಾವ 4 ಗಂಟೆ ಸುಮಾರಿಗೆ ಶ್ವೇತಾ ಸಾವನ್ನಪ್ಪಿದ್ದಾರೆ.

ಈ ನಡುವೆ ಶ್ವೇತಾ ದಿಢೀರ್ ಸಾವಿಗೆ ಬ್ರೈನ್ ಸ್ಟ್ರೋಕ್ ಕಾರಣ ಎಂದು ತಿಳಿದು ಬಂದಿದೆ. ಬೆಂಗಳೂರಿಗೆ ಕರೆತರುವಾಗಲೇ ಶ್ವೇತಾ ಕೋಮಾಗೆ ಜಾರಿದ್ದರು. ದುಃಖದ ಮಧ್ಯೆಯೇ ಬ್ರೈನ್ ನಿಷ್ಕ್ರಿಯಗೊಂಡಿದೆ. ಮಾತ್ರವಲ್ಲದೆ ಮೆದುಳಲ್ಲಿ ರಕ್ತಸ್ರಾವ ಸಹ ಆಗಿದೆ ಎನ್ನಲಾಗಿದೆ. ಇದರಿಂದ ಅಂಗಾಂಗ ದಾನ ಮಾಡಲು ನಿರ್ಧರಿಸಿದ್ದ ಪೋಷಕರು ಅದರಿಂದ ಹಿಂದೆ ಸರಿದಿದ್ದಾರೆ. ಒಬ್ಬಳೇ ಮುದ್ದಿನ ಮಗಳನ್ನು ಕಳೆದುಕೊಂಡು ಹೆತ್ತವರು ಕಣ್ಣೀರಿನಲ್ಲಿ ಮುಳುಗಿದ್ದಾರೆ. ಸ್ವಗ್ರಾಮದಲ್ಲಿ ಅಂತಿಮ ವಿಧಿ ವಿಧಾನ ನೆರವೇರಿತು.

# ನಿರುದ್ಯೋಗ ಸಮಸ್ಯೆ ನಿವಾರಿಸಲು ಕೈಗಾರಿಕೆ ಸ್ಥಾಪನೆಗೆ ಚಿಂತನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಚನ್ನರಾಯಪಟ್ಟಣ: ತಾಲೂಕಿನಲ್ಲಿ ನಿರುದ್ಯೋಗ ಸಮಸ್ಯೆ ಬಗೆಹರಿಸುವ ಸಲುವಾಗಿ ಯುವಕ-ಯುವತಿಯರಿಗೆ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಕೈಗಾರಿಕೆ ಸ್ಥಾಪಿಸುವ ಕುರಿತು ಚಿಂತನೆ ನಡೆಸಿದೆ ಎಂದು ಶಾಸಕ ಸಿ.ಎನ್ .ಬಾಲಕೃಷ್ಣ ತಿಳಿಸಿದರು.

ತಾಲ್ಲೂಕಿನ ನುಗ್ಗೇಹಳ್ಳಿ ಹೋಬಳಿ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಕೈಗಾರಿಕೋದ್ಯಮ ಸ್ಥಾಪನೆ ಮಾಡುವ ಸಲುವಾಗಿ ಕೇಂದ್ರ ಸಚಿವ ಹೆಚ್ .ಡಿ.ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಲಾಗಿದೆ. ಬೆಂಗಳೂರು ಹಾಗೂ ಜಿಲ್ಲಾ ಕೇಂದ್ರ ಸೇರಿದಂತೆ ಅನೇಕ ಭಾಗಗಳಲ್ಲಿ ತಾಲೂಕಿನ ಜನರು ಕೆಲಸ ಮಾಡುತ್ತಿದ್ದಾರೆ. ತಾಲೂಕಿನ ಅಭಿವೃದ್ಧಿಯ ದೃಷ್ಟಿಯಿಂದ ಸೂಕ್ತವಾದ ಜಾಗವನ್ನು ಗುರುತಿಸುವ ಮೂಲಕ ಕೈಗಾರಿಕೋದ್ಯಮವನ್ನು ಪ್ರಾರಂಭ ಮಾಡಿದರೆ ಅನುಕೂಲವಾಗುತ್ತದೆ. ಈ ಬಗ್ಗೆ ಚಿಂತನೆ ನಡೆಸಲಾಗಿದೆ. ಹೋಬಳಿ ಕೇಂದ್ರ, ದಿನೇ ದಿನೇ ಹೆಚ್ಚು ಅಭಿವೃದ್ಧಿ ಹೊಂದುತ್ತಿದ್ದು ತಮ್ಮ ಸ್ವಂತ ಹೋಬಳಿ ಕೇಂದ್ರದಲ್ಲೇ ಹೊಸ ಉದ್ಯಮ ಪ್ರಾರಂಭ ಮಾಡುವ ದೃಷ್ಟಿಯಿಂದ ಜಂಬೂರು ಗ್ರಾಮದ ಧರಣಿಕುಮಾರ್ ಹಾಗೂ ದರ್ಶನ್ ನೂತನ ಉದ್ಯಮವನ್ನು ಪ್ರಾರಂಭ ಮಾಡಿದ್ದಾರೆ. ಬ್ರಾಂಡೆಡ್ ಬಟ್ಟೆಗಳು ಕಂಪನಿ ದರದಲ್ಲೇ ಸಿಗುವುದರಿಂದ ಈ ಭಾಗದ ಜನರಿಗೆ ಅನುಕೂಲವಾಗಲಿದೆ ಎಂದರು. ಉದ್ಯಮಿ ಅಣತಿ ಯೋಗೇಶ್ ಜೆಡಿಎಸ್ ಯುವ ಮುಖಂಡ ಜೈದೀಪ್ ಗೌಡ ಮಾತನಾಡಿ, ನೂತನ ಸಗಟು ಮಾರಾಟ ಕೇಂದ್ರ, ಹೆಚ್ಚು ಪ್ರಸಿದ್ಧಿ ಪಡೆಯುವ ಮೂಲಕ ಅಭಿವೃದ್ಧಿ ಹೊಂದಲಿ ಎಂದು ಹಾರೈಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ದೊರೆಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಮಹಾದೇವಮ್ಮ ಶಂಕರ್, ಟಿಎಪಿಎಂಎಸ್ ನಿರ್ದೇಶಕ ತೋಟಿ ನಾಗರಾಜ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಪುಟ್ಟಸ್ವಾಮಿ, ಕೃಷಿ ಪತ್ತಿನ ಮಾಜಿ ಅಧ್ಯಕ್ಷ ಹುಲಿಕೆರೆ ಸಂಪತ್ ಕುಮಾರ್, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಕುಮಾರ್ ಇತರರಿದ್ದರು.

# ಮೇ 1ಕ್ಕೆ ಅಂಬೇಡ್ಕರ್ ಜಯಂತಿ ದುನಿಯಾ ವಿಜಯ್ ಭಾಗಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ನಗರದ ಗುಂಡೇಗೌಡಕೊಪ್ಪಲು ಗ್ರಾಮದಲ್ಲಿ ಮೇ 1ರ ಸಂಜೆ 5 ಗಂಟೆಗೆ ಸಂವಿಧಾನದ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಹಮ್ಮಿಕೊಳ್ಳಲಾಗಿದೆ ಎಂದು ಗುಡ್ಡೇನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ರಂಗಸ್ವಾಮಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಅಂದು ಸಂಜೆ 5 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಟಿ.ನರಸೀಪುರದ ಕೊಳತ್ತೂರು ಬುದ್ಧ ವಿಹಾರದ ಸುಗತಪಾಲ ಬಂತೇಜಿ ಸಾನ್ನಿಧ್ಯ ವಹಿಸಲಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮಾಜಿ ಶಾಸಕ ಪ್ರೀತಂ ಜೆ.ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಚಲನಚಿತ್ರ ನಟ ದುನಿಯಾ ವಿಜಯ್, ಲೇಖಕ ಸುಬ್ಬು ಹೊಲೆಯಾರ್, ಮಹಾನಗರ ಪಾಲಿಕೆ ಪೌರಾಯುಕ್ತ ಆರ್.ಕೃಷ್ಣಮೂರ್ತಿ, ಚಲನಚಿತ್ರ ನಿರ್ದೇಶಕ ಜಡೇಶ್ ಹಂಪಿ, ಮುಖಂಡರಾದ ಕೃಷ್ಣದಾಸ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹೆಚ್.ಎಂ.ಮನುಕುಮಾರ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದು. ಸರಿಗಮ ಖ್ಯಾತಿಯ ಗುರುದತ್ ಮತ್ತು ತಂಡದವರಿಂದ ಗಾನ ರಸಮಂಜರಿ ಕಾರ್ಯಕ್ರಮ ನಡೆಯಲಿದೆ ಎಂದರು.

ಅಂಬೇಡ್ಕರ್ ಯುವಕರ ಸಂಘದ ಪ್ರತಾಪ್, ಅನಿಲ್ ಕುಮಾರ್, ಸಂತೋಷ್, ಪ್ರದೀಪ್ ಇದ್ದರು.

# ದಿನದಿಂದ ದಿನಕ್ಕೆ ಹೆಚ್ಚುತ್ತಲೇ ಇದೆ ತಾಪಮಾನ

## ಬೆಳಿಗ್ಗೆ 11 ರಿಂದ ಸಂಜೆ 4ರ ವರೆಗೆ ಬಿಸಿಲ ತಾಪ | ಆರೋಗ್ಯದ ಮೇಲೆ ಪರಿಣಾಮ ಸಾಧ್ಯತೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಡವರ ಊಟಿ ಎಂದೇ ಹೆಸರು ಗಳಿಸಿರುವ ಜಿಲ್ಲೆಯಲ್ಲಿ ಈ ಬಾರಿ ಬಿಸಿಲ ಬೇಗೆ ತೀವ್ರವಾಗಿದ್ದು ನೆತ್ತಿ ಸುಡುವ ಬಿಸಿಲಿನ ಝಳ, ಆಯಾಸ ತರುವ ಬೆವರಿಗೆ ಜನರು ಬಸವಳಿದಿದ್ದಾರೆ.



ಆಹ್ಲಾದಕರ ವಾತಾವರಣಕ್ಕೆ ಹೆಸರಾಗಿದ್ದ ಹಾಸನ ಈಗ ಕಾದ ಕಾವಲಿಯಂತಾಗಿದೆ. ವಾತಾವರಣದಲ್ಲಿ ತೇವಾಂಶ ಕಡಿಮೆಯಾಗಿ ಉಷ್ಣಾಂಶ ನಿರೀಕ್ಷೆ ಮೀರಿ ಹೆಚ್ಚಾಗಿದ್ದು ಸಾರ್ವಜನಿಕರು ತತ್ತರಿಸಿದ್ದಾರೆ. ಕಳೆದ ಒಂದು ತಿಂಗಳಿಂದ ಬಿಸಿಲಿನ ತಾಪ ಹೆಚ್ಚುತ್ತಲೇ ಇದ್ದು ಪ್ರಯಾಸಪಡುವಂತಾಗಿದೆ. ದಿನದಿಂದ ದಿನಕ್ಕೆ ತಾಪಮಾನ ಹೆಚ್ಚುತ್ತಲೇ ಇದ್ದು, ಭಾನುವಾರ 35 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ. ಕೆಂಡದಂತಹ ಬೇಗೆಗೆ ಬೆಳಿಗ್ಗೆ 11 ರಿಂದ ಸಂಜೆ 4ರ ವರೆಗೆ ಜನಸಂಚಾರವೂ ಕಡಿಮೆಯಾಗಿದೆ. ಉತ್ತರ ಕರ್ನಾಟಕದ ಜಿಲ್ಲೆಗಳಿಗೂ ಹಾಸನಕ್ಕೂ ವ್ಯತ್ಯಾಸವೇ ಇಲ್ಲದಂತಾಗಿದೆ. ಬೆಳಿಗ್ಗೆ 9ರ ವರೆಗೆ ವಾಕಿಂಗ್ ಮಾಡುತ್ತಿದ್ದ ಜನರು ಈಗ ಆದಷ್ಟು ಬೇಗನೇ ಮನೆ ಸೇರಿಕೊಳ್ಳುತ್ತಿದ್ದಾರೆ. ಬೆಳಿಗ್ಗೆ 10 ಗಂಟೆ ವೇಳೆಗೆ ಮೈಸುಡುವಷ್ಟು ಬಿಸಿಲು ಕಾಣಿಸಿಕೊಳ್ಳುತ್ತಿದೆ. ಬಿಸಿಲ ಬೇಗೆಯಿಂದ ಕೆಲ ರೋಗಗಳು ಜನರನ್ನು ಕಾಡಲು ಶುರು ಮಾಡಿವೆ. ಈ ಋತುಮಾನದ ಖಾಯಿಲೆಗಳಾದ ಕಾಲರಾ, ವಿಷಮಶೀತ ಜ್ವರ, ಕಣ್ಣಿನ ತೊಂದರೆ, ವೈರಲ್ ಸೋಂಕು, ನಿರ್ಜಲೀಕರಣ, ಹೊಟ್ಟೆ ನೋವು, ತಲೆ ಸುತ್ತು, ಅತಿಯಾದ ಸೂರ್ಯ ಕಿರಣದಿಂದ ಚರ್ಮ ರೋಗಗಳು ಕಾಣಿಸಿಕೊಳ್ಳಲಿದೆ ಎಂದು ವೈದ್ಯರು ಹೇಳಿದ್ದಾರೆ.

ಸನ್‌ಬರ್ನ್, ಸನ್‌ಟ್ಯಾನ್, ಸೋಲಾರ್ ಅರ್ಟಿಕೆರಿಯಾ, ಅಲರ್ಜಿ, ಚರ್ಮದ ಮೇಲೆ, ನೆರಿಗೆ, ತುಟಿಗಳ ಒಣಗುವಿಕೆ, ಮುಖದ ಮೇಲೆ ಸಣ್ಣ ಮಚ್ಚೆಗಳಾಗುವುದು ಹೀಗೆ ನಾನಾ ಸಮಸ್ಯೆಗಳು ಎದುರಾಗಬಹುದು. ಆದ್ದರಿಂದ ಇವುಗಳ ತಡೆಗಟ್ಟುವಿಕೆ ಮತ್ತು ನಿವಾರಣೆ ಮುಖ್ಯವಾಗಿದೆ. ಬಿಸಿಲಿನಲ್ಲಿ ಓಡಾಡುವ ಸಂದರ್ಭಗಳಲ್ಲಿ ಮುಖಕ್ಕೆ ಸೂರ್ಯನ ಕಿರಣಗಳು ಬೀಳದಂತೆ ರಕ್ಷಣೆಯಾಗಿ ಟೋಪಿ ಧರಿಸುವುದು ಅಥವಾ ಛತ್ರಿ ಬಳಸುವುದು ಸೂಕ್ತ. ಸೂರ್ಯನ ಕಿರಣಗಳು ಕಣ್ಣಿಗೆ ತಾಗದಂತೆ ಕಪ್ಪು ಕನ್ನಡದ ಧರಿಸಬಹುದು. ದೇಹದ ತೇವಾಂಶ ಸಮ ಪ್ರಮಾಣದಲ್ಲಿರಲು ಹೆಚ್ಚಾಗಿ ನೀರು ಸೇವಿಸಬೇಕು ಎನ್ನುತ್ತಾರೆ ವೈದ್ಯರು.

ಕಳೆದ ಕೆಲವು ದಿನಗಳಿಂದ ಜಿಲ್ಲೆಯಲ್ಲಿ ಸೂರ್ಯನ ಶಾಖ ಹೆಚ್ಚಾಗಿದ್ದು, ಇನ್ನೂ ಕೆಲವು ದಿನ ಇದೇ ಉಷ್ಣಾಂಶ ಮುಂದುವರಿಯಲಿದೆ ಎಂದು ಹವಾಮಾನ ತಜ್ಞರು ಹೇಳಿದ್ದಾರೆ. ವಾಹನಗಳ ಸಂಖ್ಯೆ ಹೆಚ್ಚಳ, ಕಟ್ಟಡಗಳ ನಿರ್ಮಾಣ, ವಾಯು ಮಾಲಿನ್ಯದಿಂದಾಗಿ ಈ ಬಾರಿ ಬಿಸಿಲು ಹೆಚ್ಚಾಗಿದೆ.

### 32 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ

ಪ್ರಸಕ್ತ ಬೇಸಿಗೆ ಅವಧಿಯಲ್ಲಿ ಜಿಲ್ಲೆಯ 32 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಲ್ಬಣಗೊಂಡಿದ್ದು, ಖಾಸಗಿ ಬೋರ್‌ವೆಲ್ ಮೂಲಕ ನೀರು ಪೂರೈಸಲಾಗುತ್ತಿದೆ. ಆಲೂರು ತಾಲ್ಲೂಕಿನ 4, ಅರಕಲಗೂಡು 4, ಬೇಲೂರು 9, ಚನ್ನರಾಯಪಟ್ಟಣ 4 ಹಾಗು ಹಾಸನದ 11 ಗ್ರಾಮಗಳಲ್ಲಿ ನೀರಿನ ಬವಣೆ ಕಾಣಿಸಿಕೊಂಡಿದೆ. ಹಾಸನದ ಶಂಕರನಹಳ್ಳಿಯಲ್ಲಿ ಮಾತ್ರ ರೈತರೊಬ್ಬರು ಉಚಿತವಾಗಿ ನೀರು ಕೊಡುತ್ತಿದ್ದಾರೆ. ಉಳಿದ ಕಡೆಗೆ ಗ್ರಾಮ ಪಂಚಾಯಿತಿ ವತಿಯಿಂದ ಹಣ ಭರಿಸಲಾಗುತ್ತಿದೆ.

### ತಂಪು ಪಾನೀಯಗಳತ್ತ ಮೊರೆ

ಬಿಸಿಲ ಬೇಗೆಯಿಂದಾಗಿ ಸಾರ್ವಜನಿಕರು ತಂಪು ಪಾನೀಯಗಳತ್ತ ಮೊರೆ ಹೋಗಿದ್ದಾರೆ. ಎಳನೀರು, ಕಲ್ಲಂಗಡಿ, ಮಜ್ಜಿಗೆ, ಹಣ್ಣು ಪದಾರ್ಥಗಳ ಸೇವನೆಗೆ ಮುಂದಾಗಿದ್ದಾರೆ. ನಗರದ ಮುಖ್ಯ ರಸ್ತೆಗಳಲ್ಲಿ ಬೆಳಿಗ್ಗೆಯಿಂದಲೇ ರಸ್ತೆ ಬದಿ ಎಳನೀರು ಅಂಗಡಿಗಳ ಮುಂದೆ ಸಾರ್ವಜನಿಕರು ನಿಲ್ಲುವುದನ್ನು ಕಾಣಬಹುದು. ಹೋಟೆಲ್‌ಗಳಲ್ಲೂ ಸಹ ಮೊಸರನ್ನ, ಮಜ್ಜಿಗೆ ಪದಾರ್ಥಕ್ಕೆ ಬೇಡಿಕೆ ಹೆಚ್ಚಾಗಿದೆ.

# ಮಹಿಳಾ ಮೀಸಲಾತಿಗಾಗಿ ಕಾಂಗ್ರೆಸ್ ಸಹಿ ಸಂಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಆಗ್ರಹಿಸಿ ಪಟ್ಟಣದಲ್ಲಿ ಕಾಂಗ್ರೆಸ್ ಮಹಿಳಾ ಘಟಕದಿಂದ ಸಹಿ ಸಂಗ್ರಹ ಅಭಿಯಾನ ನಡೆಯಿತು.



ಪುರಸಭೆ ಮಾಜಿ ಅಧ್ಯಕ್ಷೆ ತೀರ್ಥಕುಮಾರಿ ವೆಂಕಟೇಶ್ ಮಾತನಾಡಿ, ಮಹಿಳಾ ಮೀಸಲಾತಿ ಸಂಬಂಧ ಲೋಕಸಭೆಯಲ್ಲಿ ನಡೆದ ಬೆಳವಣಿಗೆಗಳನ್ನು ಎಲ್ಲರೂ ಗಮನಿಸಿದ್ದೇವೆ. ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಮಸೂದೆಯನ್ನು ಒಟ್ಟಿಗೆ ಅಂಗೀಕಾರಕ್ಕೆ ತಂದಿದ್ದರಿಂದ ಕಾಂಗ್ರೆಸ್ ಹಾಗು ಮಿತ್ರ ಪಕ್ಷಗಳು ವಿರೋಧಿಸಿದವು. ಎನ್‌ಡಿಎ ಸರ್ಕಾರಕ್ಕೆ ಮಹಿಳೆಯರ ಮೇಲೆ ಕಾಳಜಿ ಇದ್ದಿದ್ದರೆ ಅದಕ್ಕೆ ಮಾತ್ರ ಪ್ರಾಶಸ್ತ್ಯ ನೀಡಬೇಕಿತ್ತು ಎಂದರು.

2013ರಲ್ಲಿ ಡಾ. ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರ ಮಹಿಳಾ ಮೀಸಲಾತಿ ಮಸೂದೆಗೆ ರಾಜ್ಯಸಭೆಯಲ್ಲಿ ಅಂಗೀಕಾರ ಪಡೆದಿತ್ತು. ಆದರೆ ವಿರೋಧ ಪಕ್ಷದಲ್ಲಿದ್ದ ಎನ್‌ಡಿಎ ವಿರೋಧ ಮಾಡಿದ್ದರಿಂದ ಲೋಕಸಭೆಯಲ್ಲಿ ಮಸೂದೆ ಅಂಗೀಕಾರ ಆಗಲಿಲ್ಲ. ಈಗ ಆಡಳಿತದಲ್ಲಿರುವ ಎನ್‌ಡಿಎ ದೇಶದ ಮಹಿಳೆಯರಿಗೆ ಘೋರ ಅನ್ಯಾಯ ಮಾಡಿದೆ ಎಂದರು.

ರಾಜಕೀಯ ಲಾಭಕ್ಕಾಗಿ ಕ್ಷೇತ್ರ ಪುನರ್ ವಿಂಗಡಣೆ ಮೂಲಕ ಪ್ರಜಾಪ್ರಭುತ್ವದ ಕೊಲೆಗೆ ಮುಂದಾಗಿದೆ. ಈ ನೀತಿಯನ್ನು ಕಾಂಗ್ರೆಸ್ ಹಿಸುವುದಿಲ್ಲ. ಬಿಜೆಪಿ ಮಹಿಳಾ ಪರ ಸರ್ಕಾರ ಎಂದು ಬಿಂಬಿಸಲು ಹಲವು ಪ್ರಯತ್ನ ನಡೆಸುತ್ತಿದೆ. ಮಹಿಳಾ ಸಬಲೀಕರಣದ ಬಗ್ಗೆ ನಿಜವಾದ ಬದ್ಧತೆ ಇದ್ದರೆ ಶೇ. 33 ಮೀಸಲಾತಿ ಮಸೂದೆಯನ್ನು ಪ್ರತ್ಯೇಕವಾಗಿ ಮಂಡಿಸಬೇಕೆಂದರು. ಜನಸಂಖ್ಯೆ ಆಧಾರಿತ ಕ್ಷೇತ್ರ ಪುನರ್ ವಿಂಗಡಣೆಯಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗುತ್ತದೆ. ಆದ್ದರಿಂದ ಕೇಂದ್ರ ಸರ್ಕಾರ ಕುತಂತ್ರ ಬಿಟ್ಟು ಮಹಿಳಾ ಮೀಸಲಾತಿ ಬಿಲ್ ಪಾಸ್ ಮಾಡುವ ಮೂಲಕ ಬದ್ಧತೆ ಪ್ರದರ್ಶಿಸಲಿ ಎಂದು ಸವಾಲೆಸೆದರು.

ಪುರಸಭೆ ಸದಸ್ಯೆ ಸೌಭಾಗ್ಯ ಆಂತೋಣಿ ಮಾತನಾಡಿ, ದೇಶದ ಒಟ್ಟು ಜನಸಂಖ್ಯೆಯಲ್ಲಿ ಮಹಿಳೆಯರು ಶೇ. 50 ರಷ್ಟಿದ್ದರೂ ರಾಜಕೀಯ ಕ್ಷೇತ್ರದಲ್ಲಿ ಕೇವಲ ಶೇ. 5ರಷ್ಟು ಅವಕಾಶ ಕಲ್ಪಿಸಲಾಗಿದೆ. ಮಹಿಳೆಯರು ರಾಜಕೀಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವುದು ಅಗತ್ಯ. ಮೀಸಲಾತಿಗೆ ಕೆಲ ರಾಜಕೀಯ ಪಕ್ಷಗಳು ವಿರೋಧ ವ್ಯಕ್ತಪಡಿಸುತ್ತಿದ್ದು, ಇಂದಿನ ಸೀಟು ಹಂಚಿಕೆಯಲ್ಲಿ ಬದಲಾವಣೆ ಆಗುವ ಭಯವೇ ಅದಕ್ಕೆ ಕಾರಣ. ಜನಗಣತಿಯ ಕಾರಣ ತೋರಿಸಿ ಮೀಸಲಾತಿ ಮುಂದೂಡುವ ಅಗತ್ಯವಿಲ್ಲ. ತಕ್ಷಣವೇ ಶೇ. 33 ಮಹಿಳಾ ಮೀಸಲಾತಿ ಜಾರಿಗೆ ತರಬಹುದು ಎಂಬುದು ಕಾಂಗ್ರೆಸ್ ನಿಲುವಾಗಿದೆ ಎಂದರು. ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ಎಂ.ಆರ್. ವೆಂಕಟೇಶ್, ಪುರಸಭೆ ಅಧ್ಯಕ್ಷೆ ಉಷಾ ಸತೀಶ್, ಸದಸ್ಯೆ ಮೀನಾಕ್ಷಿ ವೆಂಕಟೇಶ್, ಜಮೀಲಾ ತೌಫಿಕ್, ಸದಸ್ಯ ಬಿ.ಗಿರೀಶ್, ಜ್ಯೋತಿ, ರಶ್ಮಿ ಮಂಜುನಾಥ್, ವಿಶಾಲಾಕ್ಷಿ, ರವೀಶ್ ಬಸವಾಪುರ, ದೇವು ಇತರರಿದ್ದರು.

# ಗುಂಡಿಬಿದ್ದ ರಸ್ತೆ: ವಾಹನ ಸವಾರರ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಬೇಲೂರು-ಹಳೇಬೀಡು ಮಾರ್ಗದ ಶಾಂತಿನಗರ ಸಮೀಪದ ಟಾರ್ ರಸ್ತೆಯಲ್ಲಿ ಅಡ್ಡವಾಗಿ ತೋಡಿರುವ ಗುಂಡಿಯಿಂದ ಅಪಘಾತಗಳ ಸಂಖ್ಯೆ ಹೆಚ್ಚುತ್ತಿದ್ದು, ರಸ್ತೆ ದುರಸ್ತಿ ಮಾಡದೆ ಕಣ್ಮುಚ್ಚಿ ಕುಳಿತಿರುವ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಸುಮಾರು ಒಂದು ತಿಂಗಳ ಹಿಂದೆ ಪೈಪ್‌ಲೈನ್ ಸಂಪರ್ಕದ ಕೆಲಸಕ್ಕಾಗಿ ತೋಡಲಾದ ಗುಂಡಿಯನ್ನು ಇಂದಿಗೂ ಮುಚ್ಚದಿರುವುದರಿಂದ, ವಾಹನ ಸವಾರರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ದ್ವಿಚಕ್ರ ವಾಹನ ಸವಾರರು ಗುಂಡಿಯನ್ನು ತಪ್ಪಿಸಲು ಹೋಗಿ ನಿಯಂತ್ರಣ ಕಳೆದುಕೊಂಡು ಅಪಘಾತಕ್ಕೀಡಾಗುತ್ತಿರುವ ಘಟನೆಗಳು ಹೆಚ್ಚುತ್ತಿವೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ನಿವೃತ್ತ ಕೃಷಿ ಅಧಿಕಾರಿ ಚಂದ್ರಶೇಖರ್ ಮಾತನಾಡಿ, ಒಂದೂವರೆ ತಿಂಗಳಾದರೂ ಗುಂಡಿ ಮುಚ್ಚದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿ. ವೇಗವಾಗಿ ಬರುವ ವಾಹನಗಳು ಏಕಾಏಕಿ ಬ್ರೇಕ್ ಹಾಕುವುದರಿಂದ ಅಪಘಾತ ಸಂಭವಿಸುತ್ತಿವೆ. ವಾಹನಗಳಿಗೂ ಹಾನಿಯಾಗುತ್ತಿದೆ. ತಕ್ಷಣ ರಸ್ತೆ ದುರಸ್ತಿ ಮಾಡಿ ಜೀವಹಾನಿ ತಪ್ಪಿಸಬೇಕು ಎಂದು ಆಗ್ರಹಿಸಿದರು.

ಸಿಕಂದರ್ ಪಾಷಾ, ಅಂಜುಂ, ಸೈರಸ್ ಖಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೆಂಚಾಂಬ ದೇವಿ ದೊಡ್ಡ ಜಾತ್ರೆಗೆ ವಿದ್ಯುಕ್ತ ತೆರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ತಾಲ್ಲೂಕಿನ ಕೆ.ಹೊಸಕೋಟೆ ಹೋಬಳಿ ಹರಿಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಹಾಸನಾಂಬ ದೇವಿ ಹಿರಿಯ ಸಹೋದರಿ ಕೆಂಚಾಂಬ ದೇವಿಯ ದೊಡ್ಡ ಜಾತ್ರೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಾನುವಾರ ಅದ್ದೂರಿಯಾಗಿ ಜರುಗಿತು.



ಏ.19 ರಂದು ಪ್ರಾರಂಭವಾಗಿದ್ದ ಶ್ರೀ ಕೆಂಚಾಂಬ ಜಾತ್ರೆ, ಏ.26ರಂದು ಸಂಪನ್ನಗೊಂಡಿತು. ಜಾತ್ರಾ ಮಹೋತ್ಸವ ಅಂಗವಾಗಿ ವಿವಿಧ ಧಾರ್ಮಿಕ ಕೈಂಕರ್ಯಗಳು ನೆರವೇರಿದವು. ದೇವಿಯ ಮೂಲ ದೇವಸ್ಥಾನದಲ್ಲಿ ಏ. 19ರ ಭಾನುವಾರ ಪಾದಪೂಜೆ, ಸಾರು, ವಸಂತ ಸೇವೆ ಮೂಲಕ ಜಾತ್ರೆ ವಿದ್ಯುಕ್ತವಾಗಿ ಆರಂಭ ಪಡೆಯಿತು. ಏ. 22ರಂದು ಪಾದ ತೂಗುವ ಜಾತ್ರೆ ನಡೆದು ನಂತರ ವಸಂತ ಉತ್ಸವ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ ನೆರವೇರಿದವು.

ಏ. 24ರಂದು ಉಕ್ಕುಂದ ಪೂಜೆ ನಡೆದವು.


ಏ.25ರ ಶನಿವಾರ ರಾತ್ರಿ 8 ಗಂಟೆಗೆ ಮೂಲ ದೇವಸ್ಥಾನದಲ್ಲಿ ಉದ್ವಾರ್ಚನೆ, ಸಪ್ತಮಾತೃಕಾ ಸಹಿತ ಶ್ರೀಕೆಂಚಾಂಬಿಕೆಗೆ ಮಹಾಪೂಜೆ, ಸುಗ್ಗಿ, ಮಹಾಮಂಗಳಾರತಿ ಜರುಗಿದವು. ಏ.26ರ ಭಾನುವಾರ ಬೆಳಿಗ್ಗೆ ಮೂಲ ದೇವಸ್ಥಾನದಿಂದ ಹೊರಟ ದೇವಿಯ ಒಡವೆ, ಮುಖ, ಪಾದುಕೆ, ಬೆಳ್ಳಿ ಹೆಡಗೆ, ಪುಷ್ಪ, ಉತ್ಸವ ಮೂರ್ತಿಗಳ ಮೆರವಣಿಗೆ ದೇವಾಲಯಕ್ಕೆ ತಲುಪಿ ಅಲಂಕಾರ, ಅಭಿಷೇಕ, ಪೂಜೆ, ಬಲಿಪ್ರದಾನದ ನಂತರ ಮಹಾಮಂಗಳಾರತಿ ಸಂಪನ್ನವಾಯಿತು.

ಮಧ್ಯಾಹ್ನ 2 ಗಂಟೆಗೆ ಬನ್ನಿ ಮಂಟಪದಲ್ಲಿ ಶ್ರೀದೇವಿ ಹಾಗು ವೀರಭದ್ರ ದೇವರ (ಭಂಟ) ಸಮಾಗಮವಾಯಿತು. ದೇವಿಯ ದರ್ಶನಕ್ಕೆ ಆಗಮಿಸಿದ ಭಕ್ತರಿಗೆ ರಾತ್ರಿ 10.30ರ ವರೆಗೂ ದೇವಿಯ ಪಾದ ಮುಟ್ಟಿ ನಮಸ್ಕರಿಸಲು ಅವಕಾಶ ಕಲ್ಪಿಸಿಕೊಡಲಾಗಿತ್ತು. ಮಂಗಳಾರತಿ, ಅಲಂಕಾರ ವಿಸರ್ಜನೆಗೊಂಡು ಮೂಲ ದೇವಸ್ಥಾನಕ್ಕೆ (ಬನ) ಶ್ರೀದೇವಿಯ ಮೆರವಣಿಗೆ ಸೇರಿದ ಬಳಿಕ ಜಾತ್ರಾ ಮಹೋತ್ಸವಕ್ಕೆ ತೆರೆ ಬಿದ್ದಿತು.

ಏ.27ರ ಸೋಮವಾರದಿಂದ ಮೇ 2ರ ವರೆಗೂ ದೇವಸ್ಥಾನದ ಬಾಗಿಲನ್ನು ಮುಚ್ಚಲಾಗುತ್ತದೆ. ಆ ಮೇಲೆ ದೇವಸ್ಥಾನದ ಬಳಿ ಯಾರೂ ಸುಳಿಯುವಂತಿಲ್ಲ. ಮೇ 3ರಂದು ಬಾಗಿಲು ತೆರೆಯುವ ಜಾತ್ರೆ ನಡೆದು ದೇವಿಗೆ ವಿಶೇಷ ಪೂಜೆ ಕೈಂಕರ್ಯಗಳು ನಡೆಯುತ್ತವೆ.

ತಹಶೀಲ್ದಾರ್ ಮಲ್ಲಿಕಾರ್ಜುನ್ ಹಾಗು ಆಲೂರು ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಮೋಹನ್ ರೆಡ್ಡಿ ಹಾಗು ಸಿಬ್ಬಂದಿ ಬಿಗಿ ಬಂದೋಬಸ್ ವ್ಯವಸ್ಥೆ ಕಲ್ಪಿಸಿದ್ದರು.

ಶಾಸಕ ಸಿಮೆಂಟ್ ಮಂಜು, ಮಾಜಿ ಶಾಸಕ ಹೆಚ್.ಕೆ.ಕುಮಾರಸ್ವಾಮಿ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಕೆ.ಎಸ್.ಮಂಜೇಗೌಡ ಮತ್ತಿತರರು ಪಾಲ್ಗೊಂಡಿದ್ದರು.



## ಮಾಡಾಳು ಗ್ರಾಮದಲ್ಲಿ ಶಿವಲಿಂಗ ಸ್ವಾಮೀಜಿ ಸ್ಮರಣೋತ್ಸವ

ಮಾಡಾಳು: ಗ್ರಾಮದ ಶ್ರೀ ಸ್ವರ್ಣ ಗೌರಮ್ಮ ದೇವಾಲಯದಲ್ಲಿ ಮೇ 1 ರಿಂದ 6ರ ವರೆಗೆ ಹಾರನಹಳ್ಳಿ ಕೋಡಿಮಠದ ಮಹಾ ತಪಸ್ವಿ ಶ್ರೀ ಶಿವಲಿಂಗ ಸ್ವಾಮೀಜಿ ಅವರ 139ನೇ ಪುಣ್ಯ ಸಂಸ್ಮರಣೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಗೌರಮ್ಮ ದೇವಿ ಸೇವಾ ಸಮಿತಿ ಅಧ್ಯಕ್ಷ ಎಂ.ಎಸ್. ನಟರಾಜ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋಡಿಮಠದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಅವರ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಶ್ರೀ ಶಿವಲಿಂಗ ಸ್ವಾಮೀಜಿ ಸ್ಮರಣಾರ್ಥ ಕರ್ನಾಟಕ ಕಲಾಶ್ರೀ ಕಲ್ಲಿನಾಥ ಶಾಸ್ತ್ರಿ ಅವರು 5 ದಿನ ಕಾಲ ಪುರಾಣ ಪ್ರವಚನ ನಡೆಸಿ ಕೊಡಲಿದ್ದಾರೆಂದರು.

ಧಾರ್ಮಿಕ ಕಾರ್ಯಕ್ರಮವು ಪ್ರತಿದಿನ ಸಂಜೆ 7 ಗಂಟೆಗೆ ನಡೆಯಲಿದೆ. ರಾಂಪುರ ನಿರ್ವಾಣ ಸಿದ್ದೇಶ್ವರ ಸ್ವಾಮಿ ಭಜನಾ ಮಂಡಳಿಯವರಿಂದ ಭಜನಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪ್ರತಿದಿನ ಭಕ್ತರಿಗೆ ದಾಸೋಹ ವ್ಯವಸ್ಥೆ ಮಾಡಲಾಗಿದೆ. ಮುಖಂಡರಾದ ಹೆಚ್.ಸಿ.ಮಹದೇವಪ್ಪ, ಮಾಡಾಳು ಶಿವಲಿಂಗಪ್ಪ ಹಾಜರಿದ್ದರು.

## ಸತ್ಯಮಂಗಲ ಕೆರೆ ಉದ್ಯಾನದಲ್ಲಿ ಮಹಿಳಾ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸತ್ಯಮಂಗಲ ಕೆರೆ ಉದ್ಯಾನದಲ್ಲಿ ಸುಗ್ಗಿ ಯೋಗ ಕೇಂದ್ರ, ಸತ್ಯಮಂಗಲ ಕೆರೆ ಅಭಿವೃದ್ಧಿ ಸಮಿತಿ ಹಾಗೂ ಪತಂಜಲಿ ಯೋಗ ಪರಿವಾರ ವತಿಯಿಂದ ಆಯೋಜಿಸಿದ್ದ ಮಹಿಳಾ ದಿನಾಚರಣೆ ಮತ್ತು ಸುಗ್ಗಿ ಯೋಗ ಕೇಂದ್ರದ ವಾರ್ಷಿಕೋತ್ಸವದಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಭಾಗವಹಿಸಿದ್ದರು.

ಈ ವೇಳೆ ಮಾತನಾಡಿದ ಅವರು, ಸುಗ್ಗಿ ಯೋಗ ಕೇಂದ್ರ ಹಾಗು ಪತಂಜಲಿ ಯೋಗ ಪರಿವಾರ ಮನುಷ್ಯನ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಹತ್ತು ಹಲವು ಕಾರ್ಯಕ್ರಮಗಳ ಆಯೋಜಿಸಿದೆ. ಸತ್ಯಮಂಗಲ ಕೆರೆ ಅಭಿವೃದ್ಧಿ ಸಮಿತಿಯು ಕೆರೆಯನ್ನು ಸಂರಕ್ಷಿಸಿ ಅದನ್ನು ಉಳಿಸುವ ಕೆಲಸ ಮಾಡುತ್ತಿದೆ. ಈ ರೀತಿಯ ಸ್ಥಳೀಯ ಕಾರ್ಯಕ್ರಮಗಳು ಸ್ಥಳೀಯ ಬಡಾವಣೆಗಳ ಸಮಸ್ಯೆಗಳನ್ನು ತಿಳಿದುಕೊಳ್ಳಲು ಅನುಕೂಲವಾಗಲಿವೆ. ಶಾಸಕನಾಗಿ ಯಾವುದೇ ಬಡಾವಣೆಯ ಸಮಸ್ಯೆಗಳನ್ನು ಸಮಾನವಾಗಿ ಪರಿಗಣಿಸಿ ಪರಿಹರಿಸುವ ನಿಟ್ಟಿನಲ್ಲಿ ಶ್ರಮ ವಹಿಸುತ್ತೇನೆಂದರು.

## ಇತಿಹಾಸದಲ್ಲಿ ಈ ದಿನ

### ಏಪ್ರಿಲ್-28

1945: ಇಟಲಿಯ ದಿಕ್ಟೇಟರ್ (ಬೆನಿಟೋ ಮುಸೋಲಿನಿ) ಅವರನ್ನು ಗೆರಿಲ್ಲಾ ಪಡೆಗಳು ಕೊಂದವು.
2001: ಅಮೆರಿಕಾದ ಮೊದಲ ಅಂತಾರಿಕ್ಷ ಪ್ರವಾಸಿಗ ಡೆನ್ನಿಸ್ ಟಿಟೋ ಬಾಹ್ಯಾಕಾಶಕ್ಕೆ ತೆರಳಿದರು.
2003: ಆಪಲ್ ಕಂಪನಿಯ ಐಟ್ಯೂನ್ಸ್ ಸ್ಟೋರ್ ಆರಂಭವಾಯಿತು.

**ಜನನ**

1937: ಸದ್ದಾಂ ಹುಸೇನ್, ಇರಾಕ್ ಪ್ರಧಾನ ಮಂತ್ರಿ
1974: ಪೆನೆಲೋಪ್ ಕ್ರೂಸ್, ಖ್ಯಾತ ನಟಿ

**ಮರಣ**

1945: ಬೆನಿಟೋ ಮುಸೋಲಿನಿ

# ವಚನ ಸಂಪತ್ತು ಸಂರಕ್ಷಣೆಗೆ ಅವಿರತ ಹೋರಾಟ

## ತಣ್ಣೀರುಹಳ್ಳ ಮಠದಲ್ಲಿ ಬಸವ ಜಯಂತಿ | ಸುತ್ತೂರು ಶ್ರೀ ಹೇಳಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತವು ವೈಚಾರಿಕ, ಸಾಂಸ್ಕೃತಿಕವಾಗಿ ಸಂಪದ್ಭರಿತ ರಾಷ್ಟ್ರವಾಗಿ ಸಾವಿರಾರು ವರ್ಷಗಳಿಂದ ತನ್ನ ಹಿರಿಮೆಯನ್ನು ಉಳಿಸಿಕೊಂಡು ಬಂದಿದೆ. ವಚನ ಸಾಹಿತ್ಯ ಉಳಿಸಲು ಅನೇಕ ಶರಣರು ಸರ್ವಸ್ವವನ್ನು ತ್ಯಾಗ ಮಾಡಿ ಹೋರಾಡಿದ್ದಾರೆ ಎಂದು ಸುತ್ತೂರು ಮಠದ ಪೀಠಾಧ್ಯಕ್ಷ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹೇಳಿದರು.



ನಗರದ ತಣ್ಣೀರುಹಳ್ಳ ಮಠದಲ್ಲಿ ಹಮ್ಮಿಕೊಂಡಿದ್ದ ವಿಶ್ವಗುರು ಬಸವೇಶ್ವರರ 896ನೇ ಜಯಂತ್ಯೋತ್ಸವ, ನಡೆದಾಡುವ ದೇವರು, ತ್ರಿವಿಧ ದಾಸೋಹಿ ಡಾ. ಶಿವಕುಮಾರ ಸ್ವಾಮೀಜಿ ಅವರ 119ನೇ ಜಯಂತ್ಯೋತ್ಸವ, ಶ್ರೀ ಶಿವಲಿಂಗ ಸ್ವಾಮೀಜಿ ಅವರ 92ನೇ ಜಯಂತಿ, ಶ್ರೀ ವಿಜಯಕುಮಾರ ಸ್ವಾಮೀಜಿ ಅವರ 56ನೇ ಮಾಸದ ಕಾರ್ಯಕ್ರಮ ಹಾಗೂ ಶ್ರೀ ಶಿವಲಿಂಗ ಸ್ವಾಮೀಜಿ ದಾಸೋಹ ಭವನ ಮತ್ತು ಗುರು ಭವನ ಉದ್ಘಾಟನಾ ಸಮಾರಂಭದಲ್ಲಿ ಆಶೀರ್ವಚನ ನೀಡಿದರು.

ಋಷಿ ಮುನಿಗಳು ವೈಯಕ್ತಿಕ ಬದುಕನ್ನು ಬದಿಗೊತ್ತಿ ದೇಶಕ್ಕೆ ಭವ್ಯ ಪರಂಪರೆ ಕಟ್ಟಿಕೊಟ್ಟಿದ್ದಾರೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗುವ ಮೂಲಕ ಜೀವನವನ್ನು ಸಾರ್ಥಕ ಮಾಡಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಎಲ್ಲಿವರೆಗೆ ದೇಶದಲ್ಲಿ ಸಾಧು ಸಂತರು ಇರುತ್ತಾರೋ ಅಲ್ಲಿತನಕ ರಾಷ್ಟ್ರಕ್ಕೆ ಯಾವ ಅಪಾಯವಿಲ್ಲವೆಂಬುದು ಅಷ್ಟೇ ಸತ್ಯ ಎಂದರು.

ವಚನ ಸಾಹಿತ್ಯದ ಮೂಲಕ ವಿಶ್ವಗುರು ಬಸವಣ್ಣ ಅವರು ಮಾನವ ಕುಲಕ್ಕೆ ಬದುಕಿನ ದಾರಿ ಹೇಳಿಕೊಟ್ಟಿದ್ದಾರೆ. 12ನೇ ಶತಮಾನದ ಶರಣರ ಅವಧಿಯನ್ನು ಸುವರ್ಣಾಕ್ಷರಗಳಲ್ಲಿ ಬರೆದಿಡುವಂತಾಗಿದೆ. ಅದೇ ರೀತಿ ಶಿವಕುಮಾರ ಸ್ವಾಮೀಜಿ ಅವರು ಸಮಾಜಕ್ಕೆ ಬೆಳಕಾಗಿದ್ದಾರೆ ಎಂದರು.

ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಮಾತನಾಡಿ, ಮನೆ ಬೆಳಗಲು ಜ್ಯೋತಿ ಹೇಗೆ ಕೆಲಸ ಮಾಡುತ್ತದೆಯೋ ಮನುಷ್ಯನನ್ನು ಸರಿಯಾದ ದಾರಿಯಲ್ಲಿ ನಡೆಸಲು ಗುರು ಬೇಕಾಗುತ್ತಾರೆ. ನಮ್ಮ ಸಮಾಜದಲ್ಲಿ ಧಾರ್ಮಿಕ ಸಂಪ್ರದಾಯಗಳಿಗೆ ವಿಶೇಷ ಸ್ಥಾನ ನೀಡಲಾಗಿದೆ. ತುಮಕೂರಿನ ಶಿವಕುಮಾರ ಸ್ವಾಮೀಜಿ ಅವರು ತ್ರಿವಿಧ ದಾಸೋಹದ ಮೂಲಕ ನಾಡಿಗೆ ಶ್ರೇಷ್ಠ ಕೊಡುಗೆ ನೀಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸಾಗುವ ಮೂಲಕ ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಬೇಕಿದೆ ಎಂದರು.

ತಣ್ಣೀರುಹಳ್ಳ ಮಠದ ವಿಜಯಕುಮಾರ ಸ್ವಾಮೀಜಿ ಮಾತನಾಡಿ, ದಾಸೋಹ ಭವನ, ಗುರು ಭವನ ನಿರ್ಮಾಣದಲ್ಲಿ ಭಕ್ತರ ಸಹಕಾರ ಹೆಚ್ಚಿದೆ. 2021ರಲ್ಲಿ ಮಠದ ಜವಾಬ್ದಾರಿ ವಹಿಸಿಕೊಂಡ ನಾನು ಪ್ರತಿ ಭಕ್ತರ ಮನೆಗೆ ಭೇಟಿ ನೀಡಿದ್ದೇನೆ. ಎಲ್ಲಾ ಹಣಕಾಸಿನ ವ್ಯವಹಾರದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲಾಗಿದೆಯೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ವಿರಾಜಪೇಟೆ ಅರಮೆರಿ ಮಠದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಶ್ರೀ ಶಿವಲಿಂಗ ಸ್ವಾಮೀಜಿ ಅವರು 1960ರಲ್ಲಿ ವಿದ್ಯಾರ್ಥಿ ನಿಲಯ ಸ್ಥಾಪಿಸುವ ಮೂಲಕ ಜಿಲ್ಲೆಯಲ್ಲಿ ಶೈಕ್ಷಣಿಕ ಕ್ರಾಂತಿ ಪ್ರಾರಂಭಿಸಿದರು. 1983ರಲ್ಲಿ ಐಟಿಐ ಸ್ಥಾಪಿಸಿ ಎತ್ತಿನಗಾಡಿಯಲ್ಲಿ ಹಳ್ಳಿ ಹಳ್ಳಿಗೆ ತಿರುಗಿ ದವಸ ಧಾನ್ಯ ಸಂಗ್ರಹಿಸಿ ವಿದ್ಯಾರ್ಥಿಗಳಿಗೆ ಆಸರೆಯಾಗಿದ್ದಾರೆ. 2009ರಲ್ಲಿ ಸ್ವಾಮೀಜಿ ಲಿಂಗೈಕ್ಯರಾದ ಬಳಿಕ ಇಲ್ಲಿಗೆ ಮಠಾಧೀಶರಾಗಿ ಯಾರೂ ಬರಲಿಲ್ಲ. ಅಂದಿನಿಂದ 2021ರ ವರೆಗೆ ಸಮಿತಿಯವರೇ ಮಠದ ಆಸ್ತಿಯನ್ನು ಉಳಿಸಿಕೊಂಡು ಬಂದಿದ್ದಾರೆ. ಆ ಬಳಿಕ ವಿಜಯಕುಮಾರ ಸ್ವಾಮೀಜಿ ಅವರು ಮತ್ತಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ ಎಂದರು.

ಸಂಸದ ಶ್ರೇಯಸ್ ಪಟೇಲ್ ಮಾತನಾಡಿ, ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಸಾರುವ ಕಾರ್ಯಕ್ರಮಗಳು ನಮ್ಮ ಸಂಸ್ಕೃತಿ ಮತ್ತು ಸಮಾಜದ ಏಳಿಗೆಗೆ ಮಾರ್ಗದರ್ಶಕವಾಗುತ್ತವೆ. ಶ್ರೀ ವಿಜಯಕುಮಾರ ಸ್ವಾಮೀಜಿ ಅವರು ಬಂದ ನಂತರ ತಣ್ಣೀರುಹಳ್ಳ ಮಠವು ಉತ್ತಮ ರೀತಿಯಲ್ಲಿ ಬೆಳವಣಿಗೆ ಕಾಣುತ್ತಿರುವುದು ಸಂತಸದ ಸಂಗತಿ. ಮಠದ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಸೇವೆಗಳು ಇನ್ನಷ್ಟು ವಿಸ್ತರಿಸುತ್ತಿರುವುದು ಶ್ಲಾಘನೀಯವಾಗಿದೆ. ಮಠದ ಅಭಿವೃದ್ಧಿ ಕಾಮಗಾರಿಗಳಿಗೆ ಕೈಜೋಡಿಸಿ, ಸಮುದಾಯದ ಒಳಿತಿಗಾಗಿ ಶ್ರಮಿಸುವುದು ನಮ್ಮ ಕರ್ತವ್ಯವೆಂದರು.

ನಮ್ಮ ತಾತ ಜಿ. ಪುಟ್ಟಸ್ವಾಮಿಗೌಡರು ಸುತ್ತೂರು ಹಾಗೂ ಸಿದ್ದಗಂಗಾ ಮಠಗಳ ಅನುಯಾಯಿ ಆಗಿರಬೇಕೆಂದು ನನಗೆ ಯಾವಾಗಲೂ ಹೇಳುತ್ತಿದ್ದರು. ಆ ಮಾರ್ಗದಲ್ಲಿ ಖಂಡಿತವಾಗಿ ಸಾಗುತ್ತೇನೆ. ನಗರದ ಸಂತೆಪೇಟೆ ವೃತ್ತದಲ್ಲಿ ಬಸವೇಶ್ವರರ ಪುತ್ಥಳಿ ನಿರ್ಮಾಣ ಮಾಡುವ ಯೋಜನೆ ಹಾಕಿಕೊಂಡಿದ್ದು, ತ್ವರಿತಗತಿಯಲ್ಲಿ ಕ್ರಮ ವಹಿಸಲಾಗುವುದು. ಸಮುದಾಯ ಭವನ ನಿರ್ಮಾಣಕ್ಕೂ ಆದ್ಯತೆ ನೀಡಲಾಗುವುದೆಂದು ಭರವಸೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಹೆಚ್.ಪಿ.ಸ್ವರೂಪ್ ಮಾತನಾಡಿ, ನಮ್ಮ ತಂದೆ ದಿವಂಗತ ಹೆಚ್.ಎಸ್. ಪ್ರಕಾಶ್ ಅವರು ಪುಷ್ಪಗಿರಿ, ಜವೇನಹಳ್ಳಿ ಹಾಗೂ ತಣ್ಣೀರುಹಳ್ಳ ಮಠದ ಏಳಿಗೆಗೆ ಶಕ್ತಿಮೀರಿ ಶ್ರಮಿಸಿದ್ದಾರೆ. ಶಾಸಕನಾಗಿ ನಾನು ಸಹ ಜವೇನಹಳ್ಳಿ ಮಠಕ್ಕೆ 10 ಲಕ್ಷ ರೂ. ದೇಣಿಗೆ ನೀಡಿದ್ದೇನೆ. ಸಮುದಾಯದ ಏಳಿಗೆಗೆ ಕೈಲಾದ ಸಹಾಯ ಮಾಡುತ್ತೇನೆ. ಸಂತೆಪೇಟೆ ವೃತ್ತದಲ್ಲಿ ಅತಿ ಶೀಘ್ರದಲ್ಲಿ ಬಸವೇಶ್ವರ ಪುತ್ಥಳಿ ನಿರ್ಮಿಸಲಾಗುವುದೆಂದು ಭರವಸೆ ನೀಡಿದರು.

ಕನಕಪುರ ಮಠದ ಚನ್ನಬಸವ ಸ್ವಾಮೀಜಿ, ಪುಷ್ಪಗಿರಿ ಮಠದ ಸೋಮಶೇಖರ ಸ್ವಾಮೀಜಿ, ಧರ್ಮರಾಜೇಂದ್ರ ಸ್ವಾಮೀಜಿ, ಶಾಸಕ ಸಿಮೆಂಟ್ ಮಂಜು, ಹೈಕೋರ್ಟ್ ವಕೀಲ ವಿಶ್ವನಾಥ್, ಮಾಜಿ ಶಾಸಕರಾದ ಕೆ.ಎಸ್.ಲಿಂಗೇಶ್, ಬಿ.ಆರ್.ಗುರುದೇವ್, ಗ್ರಾನೈಟ್ ರಾಜಶೇಖರ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ನಿವೃತ್ತ ತಹಶೀಲ್ದಾರ್ ಶಿವಶಂಕರಪ್ಪ, ಬಿ.ಪಿ.ಐಸಾಮಿಗೌಡ, ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ನಟರಾಜು ಮತ್ತಿತರರಿದ್ದರು. ಪೂರ್ಣಕುಂಭ ಮೆರವಣಿಗೆ ಮೂಲಕ ಸುತ್ತೂರು ಸ್ವಾಮೀಜಿ ಅವರನ್ನು ಸ್ವಾಗತಿಸಲಾಯಿತು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248